ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/155/ಚುನಾವಣೆ/2023-24 ದಿನಾಂಕ: 19.12.2023.

## ಸುತ್ತೋಲೆ

ವಿಷಯ: ರಾಜ್ಯದ ಎಲ್ಲಾ ಪದವಿ ಕಾಲೇಜುಗಳಲ್ಲಿ ಮತದಾನದ ಜಾಗೃತಿ ಸಂಬಂಧ ಕೈಗೊಳ್ಳಬೇಕಾದ ಕ್ರಮಗಳ ಕುರಿತು.

ಉಲ್ಲೇಖ: ಅಪರ ಮುಖ್ಯ ಚುನಾವಣಾಧಿಕಾರಿ ಸಿಆಸು ಇಲಾಖೆ (ಚುನಾವಣೆಗಳು) ರವರ ಪತ್ರ ದಿನಾಂಕ:13.12.2023.

* * * * * *

ಭಾರತದ ಚುನಾವಣಾ ಆಯೋಗದ ಮುಖ್ಯ ಧ್ಯೇಯ ಒಳಗೊಳ್ಳುವ ಮತ್ತು ಸುಗಮ ಚುನಾವಣೆಗಳನ್ನು ನಡೆಸುವುದು, "ಯಾವುದೇ ಮತದಾರ ಮತದಾನದಿಂದ ಹೊರಗುಳಿಯಬಾರದು" ಹಾಗೂ ನ್ಯಾಯ ಸಮ್ಮತ ಮತ್ತು ಮಾಹಿತಿಯುಕ್ತ ಮತದಾನವಾಗುವಂತೆ ಮಾಡುವುದಾಗಿರುತ್ತದೆ. ಹಾಗೂ ಭಾವೀ ಮತದಾರರಾದ ಇಂದಿನ ವಿದ್ಯಾರ್ಥಿಗಳಲ್ಲಿ ಚುನಾವಣಾ ಪ್ರಕ್ರಿಯೆಯ ಬಗ್ಗೆ ಅರಿವು ಮೂಡಿಸುವ ಉದ್ದೇಶದಿಂದ ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಪದವಿ ಕಾಲೇಜುಗಳಲ್ಲಿ ಈ ಕೆಳಕಂಡಂತೆ ಕ್ರಮಕೈಗೊಳ್ಳುವುದು ಕಡ್ಡಾಯವಾಗಿರುತ್ತದೆ.

- ರಾಜ್ಯದ ಎಲ್ಲಾ ಕಾಲೇಜುಗಳಲ್ಲಿ ಮತದಾನದ ಪ್ರಾಮುಖ್ಯತೆಯ ಅರಿವು ಮಾಡಿಸುವ ಸಲುವಾಗಿ ಮತದಾರರ ಸಾಕ್ಷರತಾ ಸಂಘಗಳ ಮೂಲಕ (Electoral Literacy Clubs) ಕಾರ್ಯಕ್ರಮಗಳನ್ನು / ಚಟುವಟಿಕೆಗಳನ್ನು ನಿರ್ವಹಿಸಲು ಹಾಗೂ ಅದನ್ನು ಅವಿಭಾಜ್ಯ ಅಂಗವಾಗಿ ಪರಿಗಣಿಸಲು ಸೂಚಿಸಲಾಗಿದೆ.

- ಪ್ರತಿಯೊಂದು ಕಾಲೇಜುಗಳಲ್ಲಿ ಒಂದು "ಪ್ರಜಾಪ್ರಭುತ್ವ ಕೊಠಡಿ" (Democracy Room) ಯನ್ನು ಸ್ಥಾಪಿಸಿ ಮತದಾರ ಸಾಕ್ಷರತಾ ಸಂಘಗಳಲ್ಲಿ ಕಡ್ಡಾಯವಾಗಿ ಭಾಗವಹಿಸುವಂತೆ ಮಾಡುವುದು ಮತ್ತು ಸದರಿ ಪ್ರಜಾಪ್ರಭುತ್ವ ಕೊಠಡಿಯಲ್ಲಿ ಚುನಾವಣೆ ಸಂಬಂಧಿತ ಎಲ್ಲಾ ಅರಿವು / ಜಾಗೃತಿ / SVEEP ಕಾರ್ಯಕ್ರಮಗಳನ್ನು ನಿರ್ವಹಿಸುವುದು.

- ರಾಜ್ಯದ ಎಲ್ಲಾ ಕಾಲೇಜುಗಳಲ್ಲಿ ಸ್ಥಳಿಯ ಜಿಲ್ಲಾಡಳಿತ / ಪಾಲಿಕೆ / ಬಿ.ಬಿ.ಎಂ.ಪಿ. ಇವರ ಸಹಯೋಗದಲ್ಲಿ EVM/ VVPAT ಮತಯಂತ್ರಗಳ ಪ್ರದರ್ಶನೆ ಮತ್ತು ತರಬೇತಿ ನೀಡುವುದು.

- ಎಲ್ಲಾ ಕಾಲೇಜುಗಳಲ್ಲಿ ಮತದಾನ ಸಂಬಂಧಿತ ಶಿಕ್ಷಣ ಮತ್ತು ಚುನಾವಣಾ ಸಾಕ್ಷರತೆಯ ಕುರಿತು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವುದು.

- ಪ್ರಾಂಶುಪಾಲರ ಅಧ್ಯಕ್ಷತೆಯಲ್ಲಿ ಪ್ರತಿಯೊಂದು ಕಾಲೇಜುಗಳಲ್ಲಿ ಚುನಾವಣಾ ಸಂಬಂಧಿತ Electoral Literacy Club ನೋಡಲ್ ಅಧಿಕಾರಿಯನ್ನು ನೇಮಿಸುವುದು.

- ರಾಜ್ಯದ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳ ನೇತೃತ್ವದಲ್ಲಿ ತಮ್ಮ ವ್ಯಾಪ್ತಿಗೆ ಬರುವ ಜಿಲ್ಲಾ ಲೀಡ್ ಕಾಲೇಜುಗಳ ಪ್ರಾಂಶುಪಾಲರುಗಳನ್ನು ಜಿಲ್ಲಾ ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ.

- ಮಾನ್ಯ ಆಯುಕ್ತರ ಆದೇಶದಂತೆ ಶ್ರೀ ಹರ್ಷ ಬಿ, ನೋಡಲ್ ಅಧಿಕಾರಿಗಳು (ದೂ.ಸಂ.: 9741252035 / dce.sveep@gmail.com) ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು. – ರವರನ್ನು ಮತದಾನದ ಜಾಗೃತಿ ಸಂಬಂಧ ನೋಡಲ್ ಅಧಿಕಾರಿಯಾಗಿ ನೇಮಿಸಲಾಗಿದ್ದು, ಸದರಿಯವರು ಕಾಲೇಜು ಹಂತದಲ್ಲಿನ ಕಾರ್ಯಕ್ರಮದ ಮಾಹಿತಿಯನ್ನು ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿಯಿಂದ ಪಡೆದು ಕಾಲಕಾಲಕ್ಕೆ ವರದಿ ಸಲ್ಲಿಸುವುದು.

- ಈ ಎಲ್ಲಾ ಕಾರ್ಯ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಇಲಾಖಾ ವತಿಯಿಂದ ಆಗಿಂದಾಗ್ಗೆ ನೀಡುವ ಗೂಗಲ್ ಫಾರಂನ ಮೂಲಕ ಸಮಯಕ್ಕೆ ಸರಿಯಾಗಿ ಮಾಹಿತಿ ನೀಡುವುದು ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳ ಹಾಗೂ ಪ್ರಾಂಶುಪಾಲರುಗಳ ಜವಾಬ್ದಾರಿಯಾಗಿರುತ್ತದೆ.

- ಮುಂದುವರೆದು, ಈ ಸುತ್ತೋಲೆಯೊಂದಿಗೆ ಲಗತ್ತಿಸಿರುವ ಗೂಗಲ್ ಫಾರಂನಲ್ಲಿ ಎಲ್ಲಾ ಕಾಲೇಜುಗಳ Electoral Literacy Clubs ಗಳ ಮಾಹಿತಿಯನ್ನು ದಿನಾಂಕ:22.12.2023ರೊಳಗಾಗಿ ಅಪ್‌ಲೋಡ್ ಮಾಡುವಂತೆ ಸೂಚಿಸಲಾಗಿದೆ.

(ಟಿಪ್ಪಣಿ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1. ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಇಎಲ್‌ಸಿ ಸಂಚಾಲಕರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಎಲ್ಲಾ ಜಿಲ್ಲೆಗಳ ಜಿಲ್ಲಾ ಸರ್ಕಾರಿ ಪ್ರಥಮ ದರ್ಜೆ ಲೀಡ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಜಿಲ್ಲೆಯ ಎಲ್ಲಾ ಪ್ರಾಂಶುಪಾಲರು ಮತ್ತು ಇಎಲ್‌ಸಿ ಸಂಚಾಲಕರೊಂದಿಗೆ ಸಮನ್ವಯ ಸಾಧಿಸಿ ಕಾರ್ಯಕ್ರಮದ ಯಶಸ್ವಿ ಅನುಷ್ಠಾನಕ್ಕೆ ಸಹಕರಿಸುವುದು.
3. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.
4. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
5. ಶ್ರೀ ಹರ್ಷ ಬಿ, ನೋಡಲ್ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು:

1. ಉಪ ಮುಖ್ಯ ಚುನಾವಣಾಧಿಕಾರಿಗಳು, ಮುಖ್ಯಚುನಾವಣಾಧಿಕಾರಿಯವರ ಕಛೇರಿ, ನಿರ್ವಾಚನ ನಿಲಯ, ಶೇಷಾದ್ರಿ ರಸ್ತೆ, ಬೆಂಗಳೂರು-560 001.
2. ಕಛೇರಿ ಪ್ರತಿ.